ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃರವರ
ನ್ಯಾಯಾಲಯದಲ್ಲಿ, ನ.ರಾ.ಪುರ.
ಸಿಸಿ ನಂ **33/2025**

ಸಿ ಡಬ್ಲ್ಯೂಃ– **17**/ಪಿ ಡಬ್ಲ್ಯೂ ಃ-**8**

ಸಾಕ್ಷಿದಾರರ ಹೆಸರು ಃ ಜೆ.ಎಂ . ಚಂದ್ರಪ್ಪ
ತಂದೆಯ ಹೆಸರು ಃ ದಿವಂಗತ ಮಾಳಪ್ಪ
ವಯಸ್ಸು ಃ **55** ವರ್ಷ
ಉದ್ಯೋಗ ಃ ಮುಖ್ಯ ಪೇದೆ
ವಾಸಸ್ಥಳ ಃ ಕೊಪ್ಪ

ದಿನಾಂಕಃ **06-04-2026** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.
ಮುಖ್ಯವಿಚಾರಣೆ ಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು 2018 ರಿಂದ 2024 ರ ವರಗೆ ಎನ್ ಆರ್ ಪುರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನು.

1. ದಿಃ 25.06.2022 ರಂದು ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಅದನ್ನು ನಮ್ಮ ಠಾಣೆ ಗುನ್ನಾ ಸಂಖ್ಯೆ 74/2022 ದಾಖಲಿಸಿಕೊಂಡು ಪ್ರ.ವ.ವ. ನ್ಯಾಯಾಲಯಕ್ಕ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ದಿಃ 26.06.2022 ರಂದು ಬೆಳಗ್ಗೆ 9.30 ಕ್ಕೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ಗಾಯಾಳು ಉಮೇಶ ಇವರು ಮೃತ ಪಟ್ಟಿರುತ್ತಾರೆ ಎಂದು ತಿಳಿಸಿದ ಮೇರೆಗೆ ನಾನು ಕಲಂ 304 (ಎ) ಐ.ಪಿ.ಸಿ. ಕಲಂ ಅಳವಡಿಸಿಕೊಳ್ಳಲು ನ್ಯಾಯಾಲಯಕ್ಕೆ ನಿವೇದನೆ ಮಾಡಿಕೊಂಡಿರುತ್ತೇನೆ. ನಂತರ ಪ್ರಕರಣದ ತನಿಖೆಯನ್ನು ಚಾಸಾ 19 ರವರಿಗೆ ವಹಿಸಿಕೊಟ್ಟಿರತ್ತೇನೆ.

2. ಸಾಕ್ಷಿ ದಿಃ 25.06.2022 ರಂದು ನಾವು ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ -1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ -1 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ದಿಃ 26.06.2022 ರಂದು ತಾವು ಪಿರ್ಯಾದುದಾರರಿಂದ ಗಾಯಳು ಉಮೇಶ ಮೃತ ಪಟ್ಟಿರುವ ಬಗ್ಗೆ ಹೇಳಿಕೆಯನ್ನು ಪಡೆದುಕೊಂಡಿದ್ದು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ -2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ -2 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವ. ಯಲ್ಲಿ ನೋಡಿ ಗುರುತಿಸಿದ್ದು ಅದನ್ನು ನಿಪಿ -12 ಎಂದು ಸಾಕ್ಷಿಯ ಸಹಿಯನ್ನು ನಿಪಿ 12-ಎ ಎಂದು ಗುರುತಿಸಲಾಯಿತು. ಸಾಕ್ಷಿಯು ದಿಃ 26.06.2022 ರಂದು ನ್ಯಾಯಾಲಯಕ್ಕೆ ಕಲಂ 304 ಎ ಐಪಿಸಿ ಅಡಿ ತನಿಖೆ ಮುಂದುವರೆಸಲು ಕೋರಿ ಸಲ್ಲಿಸಿದ ಮನವಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 13 ಎಂದು ಸಾಕ್ಷಿಯ ಸಹಿಯನ್ನು ನಿಪಿ -13 ಎ ಎಂದು ಗುರುತಿಸಲಾಯಿತು.

ಪಾಟೀ ಸವಾಲು ಆರೋಪಿ **2** ಮತ್ತು **3** ರ ಪರ **Sri. N.V.S.** ವಕೀಲರಿಂದ

1. ಅಪಘಾತ ಸಂಬಂಧ ಪ್ರಕರಣಗಳಲ್ಲಿ ಆಸ್ಪತ್ರೆಯವರು ನಮ್ಮ ಠಾಣೆಗೆ ಅಪಘಾತದ ಬಗ್ಗೆ ಮಾಹಿತಿ ನೀಡಿರುತ್ತಾರೆ ಎಂದರೆ ಸರಿ. ಎನ್ ಆರ್ ಪುರ ಸರ್ಕಾರಿ ಆಸ್ಪತ್ರೆ ನಮ್ಮ ಠಾಣೆಯಿಂದ 200 ಮೀಟರ್ ದೂರದಲ್ಲಿ ಇರುತ್ತದೆ ಎಂದರೆ ಸರಿ. ನಾನು ಠಾಣಾಧಿಕಾರಿ ಇದ್ದ ಕಾಲಕ್ಕೆ ಆಸ್ಪತ್ರೆಯಿಂದ ಯಾವುದೇ ಅಪಘಾತ ಸಂಬಂಧ ಮಾಹಿತಿ ಬಂದಿರುವುದಿಲ್ಲ. ಆಸ್ಪತ್ರೆಯಿಂದ ನಮಗೆ ಮಾಹಿತಿ ಬಂದರೆ ನಮ್ಮ ಠಾಣೆಯಿಂದ ಹೋಗಿ ಅಪಘಾತ ದ ಬಗ್ಗೆ ಹೇಳಿಕೆಯನ್ನು ಪಡೆದುಕೊಳ್ಳುತ್ತೇವೆ ಎಂದರೆ ಸರಿ. ನಾನು ದೂರನ್ನು ಸ್ವೀಕರಿಸುವ ಕಾಲಕ್ಕೆ ಕೃತ್ಯ ಸ್ಥಳದಲ್ಲಿ ಹೋಗಿರುವುದಿಲ್ಲ. ಫಿರ್ಯಾದುದಾರರು ದೂರನ್ನು ಯಾವ ಕಾರಣಕ್ಕಾಗಿ ತಡವಾಗಿ ಕೊಡುತ್ತಿದ್ದಾರೆ ಎಂಬುದರ ಬಗ್ಗೆ ನಮೂದು ಇರುವುದಿಲ್ಲ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ಉತ್ತರಿಸಿರುತ್ತಾರೆ. ಅಪಘಾತದ ಬಗ್ಗೆ ಎನ್ ಆರ್ ಪುರ ಮತ್ತು ಶಿವಮೊಗ್ಗದ ನಂಜಪ್ಪ ಆಸ್ಪತ್ರೆಯಿಂದ ನಮ್ಮ ಠಾಣೆಗೆ ಯಾವುದೇ ಮಾಹಿತಿ ಬಂದಿರುವುದಿಲ್ಲ ಎಂದರೆ ಸರಿ. ನಾನು ಚಾಸಾ 1 ರವರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಇಲಾಖಾ ಅಂಕೆ ಸಂಖ್ಯೆಗಳಿಗೋಸ್ಕರ ಸುಳ್ಳು ಪ್ರಥಮ ವರ್ತಮಾನ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಫಿರ್ಯಾದುದಾರರ ಮುಂದುವರೆದ ಹೇಳಿಕೆ ಪಡೆಯುವ ಅಧಿಕಾರಿ ಇರಲಿಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ **1** ರ ಪರ ವಕೀಲರು **2** ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ತಮ್ಮ ಪಾಟೀ ಸವಾಲು ಎಂದು ಅಳವಡಿಸಿಕೊಂಡಿರುತ್ತಾರೆ.

ಮರು ವಿಚಾರಣೆ ಃ ಇಲ್ಲ ಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ.

ಸಾಕ್ಷಿದಾರರ ಸಹಿಃ